## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಮಲ್ಲಿಕಾರ್ಜುನಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಾಮರಾಜನಗರ, ಮತ್ತಿತರರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:** 1) ಅಪರ ನಿಬಂಧಕರು, ವಿಚಾರಣೆಗಳು-7, ಇವರು ಕರ್ನಾಟಕ ಲೋಕಾಯಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಎಂ.ವೈ.ಎಸ್-112/2009, ದಿನಾಂಕ: 20.07.2016

****

**ಪ್ರಸ್ತಾವನೆ:**

ಅಪರ ನಿಬಂಧಕರು, ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(1)ರ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತ ರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಚಾಮರಾಜನಗರ ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಅಮಚವಾಡಿ ಗ್ರಾಮ ಪಂಚಾಯತಿಯಲ್ಲಿ ಸರ್ಕಾರದ ಅನುದಾನ ದುರ್ಬಳಕೆಯಾಗಿದೆ ಎಂದು ಮತ್ತು ಅಂಬೇಡ್ಕರ್, ಆಶ್ರಯ, ಇಂದಿರಾ ಆವಾಸ, ನಮ್ಮ ಭೂಮಿ ನಮ್ಮ ತೋಟ ಖರೀದಿಯಲ್ಲಿ ಅವ್ಯವಹಾರ ನಡೆದಿದೆ ಎಂದು ಹಾಗೂ ಫಲಾನುಭವಿಗಳನ್ನು ಗುರುತಿಸುವಲ್ಲಿ ಅನ್ಯಾಯವಾಗಿದೆ ಎಂದು, ಫಲಾನುಭವಿಗಳ ನಕಲಿಪಟ್ಟಿ ಸೃಷ್ಟಿಸಿ ಬಡವರಿಗೆ ಅನ್ಯಾಯವಾಗಿರುತ್ತದೆ ಎಂದು ಆರೋಪಿಸಿ ಚಾಮರಾಜನಗರ ತಾಲ್ಲೂಕು ಅಮಚವಾಡಿ ನಿವಾಸಿಯಾದ ಶ್ರೀ ಡಿ.ನಾರಾಯಣಸ್ವಾಮಿ, ಬಿನ್ ದಾಸೇಗೌಡ, ಶ್ರೀ ಇವರು ಈ ಹಿಂದೆ ಚಾಮರಾಜನಗರ ತಾಲ್ಲೂಕು ತಹಶೀಲ್ದಾರರಾಗಿ ಕರ್ತವ್ಯ ನಿರ್ವಹಿಸಿದ ಶ್ರೀ ಹೆಚ್.ಜಿ.ಚಂದ್ರಶೇಖರಯ್ಯ, ಮತ್ತು ಚಾಮರಾಜನಗರ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಮಲ್ಲಿಕಾರ್ಜುನಸ್ವಾಮಿ, ಇವರುಗಳ ವಿರುದ್ಧ ಕ್ರಮ ಜರುಗಿಸಲು ನೀಡಿದ್ದ ದೂರಿನನ್ವಯ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಾಯ್ದೆ ಕಲಂ-9 ರನ್ವಯ ತನಿಖೆಯನ್ನು ಲೋಕಾಯುಕ್ತ ಸಂಸ್ಥೆಯ, ಪೊಲೀಸ್ ಅಧೀಕ್ಷಕರು ಚಾಮರಾಜನಗರ, ಇವರಿಂದ ತನಿಖೆ ನಡೆಸಿ ಪಡೆಯಲಾದ ವರದಿಯಲ್ಲಿ, ನಮ್ಮ ಭೂಮಿ ನಮ್ಮ ತೋಟ ಯೋಜನೆಗೆ ಸಂಬಂಧಪಟ್ಟಂತೆ ರೈತರುಗಳಿಂದ ಖರೀದಿಸಿರುವ ಜಮೀನುಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡದೇ 2ನೇ ಎದುರುದಾರರಾದ ಶ್ರೀ ಮಲ್ಲಿಕಾರ್ಜುನಸ್ವಾಮಿ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಾಮರಾಜನಗರ, ಇವರು ಕರ್ತವ್ಯಲೋಪವೆಸಗಿರುವುದು ಕಂಡು ಬಂದಿರುತ್ತದೆ. ಹಾಗೂ ಬಿ.ಪಿ.ಎಲ್. ಕಾರ್ಡ ಯೋಜನೆಗೆ ಸಂಬಂಧಿಸಿದಂತೆ ಬಿ.ಪಿ.ಎಲ್.ಕಾರ್ಡ್ ಪಡೆಯಲು ಅನರ್ಹರಾದ ಶ್ರೀ ಚಿಕ್ಕಪುಟ್ಟರಾಜೇ ಅರಸ್, ಎ.ಎನ್.ಕುಮಾರ್, ಗುರುಸ್ವಾಮಿ, ಎಸ್.ನಟರಾಜ್ ಹಾಗೂ ಎ.ಎಸ್.ನಾಗಸುಂದರ್ ರಾಜೇ ಅರಸ್, ಇವರುಗಳಿಗೆ ಬಿ.ಪಿ.ಎಲ್. ಕಾರ್ಡ್‌ಗಳನ್ನು ನೀಡಿ ಶ್ರೀ ಹೆಚ್.ಜಿ.ಚಂದ್ರಶೇಖರಯ್ಯ, ಹಿಂದಿನ

ತಹಶೀಲ್ದಾರ್, ಚಾಮರಾಜನಗರ ತಾಲ್ಲೂಕು, ಇವರು ಕರ್ತವ್ಯಲೋಪವೆಸಗಿರುವುದು ಕಂಡು ಬರುತ್ತದೆ ಎಂದು ವರದಿಸಿದ್ದರ ಮೇರೆಗೆ ಆರೋಪಿತ ಅಧಿಕಾರಿಗಳಿಗೆ ಜಾರಿ ಮಾಡಲಾದ ಕಾರಣ ಕೇಳುವ ನೋಟಿಸಿಗೆ ಅಧಿಕಾರಿಗಳು ನೀಡಿರುವ ಲಿಖಿತ ರಕ್ಷಣಾ ಹೇಳಿಕೆಗಳು ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ, ಸದರಿ ಆರೋಪಿತ ಅಧಿಕಾರಿಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಆರೋಪಿತ ಶ್ರೀ ಹೆಚ್.ಜಿ.ಚಂದ್ರಶೇಖರಯ್ಯ, ಹಿಂದಿನ ತಹಶೀಲ್ದಾರ, ಚಾಮರಾಜನಗರ ತಾಲ್ಲೂಕು ಮತ್ತು ಹಿಂದಿನ ಚಾಮರಾಜನಗರ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಮಲ್ಲಿಕಾರ್ಜುನಸ್ವಾಮಿ, ಇವರುಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ತಮಗೆ ವಹಿಸಿಕೊಡುವಂತೆ ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸು ಮಾಡಿರುತ್ತಾರೆ.

ಮಾನ್ಯ ಲೋಕಾಯುಕ್ತರ ವರದಿ ಹಾಗೂ ಅದರೊಂದಿಗಿನ ಅಡಕಗಳ ಪರಿಶೀಲನೆಯಿಂದ ಆಪಾದಿತ ಸರ್ಕಾರಿ ಅಧಿಕಾರಿಗಳು ಕರ್ತವ್ಯಲೋಪ, ದುರ್ನಡತೆ/ದುರ್ವರ್ತನೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಈ ಪ್ರಕರಣದಲ್ಲಿ ಭಾಗಿಯಾದ ಈ ಇಲಾಖೆಯಲ್ಲಿ ಸೇವೆ ಇಲ್ಲದೆ ಇರುವಂತಹ, ಶ್ರೀ ಚಂದ್ರಶೇಖರಯ್ಯ, ಹಿಂದಿನ ತಹಶೀಲ್ದಾರ, ಚಾಮರಾಜನಗರ ತಾಲ್ಲೂಕು, ಇವರ ವಿರುದ್ದದ ಆರೋಪಗಳ ಸಂಬಂಧ, ಮಾನ್ಯ ಉಪಲೋಕಾಯುಕ್ತರ ಶೀಫಾರಸ್ಸಿನಂತೆ, ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಇಲಾಖಾ ವಿಚಾರಣೆಯನ್ನು ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ) ರನ್ವಯ ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಲು ಅಗತ್ಯ ಕ್ರಮವಹಿಸುವಂತೆ ಅಧಿಕಾರಿಯ ಮಾತೃ ಇಲಾಖೆಯಾದ ಕಂದಾಯ ಇಲಾಖೆಯನ್ನು ಕೋರಲಾಗಿದೆ.

ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾನ್ಯ ಉಪಲೋಕಾಯುಕ್ತರು ಮಾಡಿರುವ ಶಿಫಾರಸ್ಸಿನಂತೆ, ಚಾಮರಾಜನಗರ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಮಲ್ಲಿಕಾರ್ಜುನಸ್ವಾಮಿ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ವಿವರವಾದ ಇಲಾಖಾ ವಿಚಾರಣೆಯನ್ನು ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ, ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 151 ವಿಸೇಬಿ 2016 ಬೆಂಗಳೂರು ದಿನಾಂಕ: 03-09-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಚಾಮರಾಜನಗರ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಮಲ್ಲಿಕಾರ್ಜುನಸ್ವಾಮಿ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ವಿವರವಾದ ಇಲಾಖಾ ವಿಚಾರಣೆಯನ್ನು ಜರುಗಿಸಲು

ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ 14(ಎ) ಪ್ರಕಾರ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

3/9/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಜಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3) ಅಪರ ನಿಬಂಧಕರು ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಾಮರಾಜನಗರ
6) ಸರ್ಕಾರದ ಅಧೀನ ಕಾರ್ಯದರ್ಶಿ, (ಸೇವೆಗಳು- ) ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5) ಸಂಬಂಧಿಸಿದ ಅಧಿಕಾರಿಗೆ.(ಮು.ಕಾ.ನಿ.ಅ.ಜಿಪಂ. ಚಾಮರಾಜನಗರ, ಇವರ ಮುಖಾಂತರ)

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.